**ಕರ್ನಾಟಕ ಸರ್ಕಾರ**

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ಸಂಖ್ಯೆ: ಪಪೂಶಿಇ/ಶೈ.ಶಾ-4/ತರಬೇತಿ/2/2/2015-16 ದಿನಾಂಕ:26-09-2015

ಜ್ಞಾಪನ

ವಿಷಯ: 2015-16ನೇ ಶೈಕ್ಷಣಿಕ ಸಾಲಿನಲ್ಲಿ ನಡೆಯಲಿರುವ ತರಬೇತಿ ಕಾರ್ಯಕ್ರಮಕ್ಕೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಭಾಷಾ, ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳನ್ನು ಬೋಧಿಸುವ ಉಪನ್ಯಾಸಕರುಗಳಿಗೆ ವಿಷಯಾಧಾರಿತ ತರಬೇತಿ ಕಾರ್ಯಕ್ರಮವನ್ನು ನಡೆಸಲು ಅನುದಾನ ಬಿಡುಗಡೆ ಮಾಡುವ ಕುರಿತು.

ಉಲ್ಲೇಖ: ಈ ಕಛೇರಿ ಜ್ಞಾಪನ ಸಂಖ್ಯೆ: ಪಪೂಶಿಇ/ಶೈಶಾ-04/ತರಬೇತಿ-2/2015-16, ದಿನಾಂಕ: 17-09-2015.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪದವಿ ಪೂರ್ವ ಶಿಕ್ಷಣ ಇಲಾಖೆಯು 2015-16ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾಷಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳ ಉಪನ್ಯಾಸಕರುಗಳಿಗೆ ಪದವಿ ಪೂರ್ವ ಶಿಕ್ಷಣ ಹಂತದಲ್ಲಿ ರಾಷ್ಟ್ರೀಯ ಪಠ್ಯಕ್ರಮ/ ಪುಸ್ತಕವನ್ನು ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ, ಹೊಸ ಪಠ್ಯಕ್ರಮವನ್ನು ವಿದ್ಯಾರ್ಥಿಗಳಿಗೆ ಪರಿಣಾಮಕಾರಿಯಾಗಿ ಬೋಧನೆ ಮಾಡುವ ನಿಟ್ಟಿನಲ್ಲಿ ದಿನಾಂಕ 28-09-2015 ರಿಂದ16 -10-2015 ರವರೆಗೆ ರಾಜ್ಯದ್ಯಾಂತ ಕಾರ್ಯನಿರ್ವಹಿಸುತ್ತಿರುವ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳ ಉಪನ್ಯಾಸಕರುಗಳಿಗೆ ತರಬೇತಿಯನ್ನು ನೀಡಲು ಈಗಾಗಲೇ ವೇಳಾಪಟ್ಟಿಯನ್ನು ನಿರ್ದೇಶನಾಲಯದ ಅಂತರಜಾಲದಲ್ಲಿ ಪ್ರಕಟಿಸಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಂಪನ್ಮೂಲ ವ್ಯಕ್ತಿಗಳು/ಸಂಯೋಜಕರು/ಸಹಸಂಯೋಜಕರು/ ಉಪನ್ಯಾಸಕರುಗಳಿಗೆ ತರಬೇತಿ ಕಾರ್ಯಕ್ರಮದಲ್ಲಿ ಮಾಡಬಹುದಾದ ವೆಚ್ಚದ ವಿವರ ಕೆಳಕಂಡಂತೆ ಇರುತ್ತದೆ.

| ಕ್ರಮ ಸಂ | ವೆಚ್ಚದ ವಿವರ |
|---|---|
| 1 | ಸಂಯೋಜಕರ ಸಂಭಾವನೆ 1*2500/-<br>ಸಹ ಸಂಯೋಜಕರು 1*2000 |
| 2 | ಸ್ಟೇಷನರಿ 1*100 |
| 3 | Sound system, LCD projector, OHP, Screen PPT ವ್ಯವಸ್ಥೆ ಆಸನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ಅಟೆಂಡರ್ಸ್ ಇತ್ಯಾದಿ ( ಅಂದಾಜು 1250* ಪ್ರತಿ ದಿನಕ್ಕೆ ) |
| 4 | ಊಟ ಮತ್ತು ವಸತಿ ಸಹಿತವಾಗಿದ್ದರೆ 300*1 |
| 5 | ಲಘು ಉಪಹಾರ (ವಸತಿ ರಹಿತವಾಗಿದ್ದರೆ)80*1 |
| 6 | ಸಂಪನ್ಮೂಲ ವ್ಯಕ್ತಿಗಳ ಗೌರವ ಸಂಭವಾಣೆ 1500 **Per session** |
| 7 | ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಂಪನ್ಮೂಲ ವ್ಯಕ್ತಿಗಳು/ಸಂಯೋಜಕರು/ಸಹಸಂಯೋಜಕರು/ ಉಪನ್ಯಾಕಸರುಗಳ ದಿನ ಭತ್ಯೆ |
| 8 | ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಂಪನ್ಮೂಲ ವ್ಯಕ್ತಿಗಳು/ಸಂಯೋಜಕರು/ಸಹಸಂಯೋಜಕರು/ ಉಪನ್ಯಾಕಸರುಗಳ ಪ್ರಯಾಣ ಭತ್ಯೆ |
| 9 | * ಟಿಎ/ಡಿಎಗಳನ್ನು ಕೆ.ಸಿ.ಎಸ್.ಆರ್. ನಿಯಮಾನುಸಾರ ನೀಡುವುದು.<br>* ಉಪನ್ಯಾಸಕರಿಗೆ ವಸತಿ ಸಹಿತವಾಗಿದ್ದರೆ 1/4 ಡಿ.ಎ ನೀಡುವುದು |
| 10 | ***ಸೂಚನೆ:-*** ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿರುವ ಸಂಚಿತನಿಧಿಯಿಂದ ತರಬೇತಿ ಕಾರ್ಯಕ್ರಮಕ್ಕೆ ಅನುದಾನವನ್ನು ಬಳಸಿಕೊಂಡು ನಂತರ ತರಬೇತಿ ಕಾರ್ಯಕ್ರಮಕ್ಕೆ ಬಳಕೆಯಾಗಿರುವ ಮೊತ್ತವನ್ನು ಖಜಾನೆಯಿಂದ ಸೆಳದು ಸಂಬಂಧಿಸಿದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರುಗಳಿಗೆ ನೀಡುವುದು. |

ಜಂಟಿ ನಿರ್ದೇಶಕರು (ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ.
2. ಕಛೇರಿ ಪ್ರತಿ ,